# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

## ಅಧಿಸೂಚನೆ

**ಸಂಖ್ಯೆ: ಕವಿಪ್ರನಿನಿ/ಬಿ16/40360/2016-17** **ದಿನಾಂಕ: 13.02.2019**

**ವಿಷಯ:** ಕವಿಪ್ರನಿನಿಯಲ್ಲಿ ಕಿರಿಯ ಇಂಜಿನಿಯರ್(ವಿ) ಹುದ್ದೆಯ ಕಾಯ್ದಿರಿಸಿದ ಪಟ್ಟಿಯನ್ನು ಪ್ರಕಟಿಸುತ್ತಿರುವ ಬಗ್ಗೆ

**ಉಲ್ಲೇಖ:**
1. ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/40360/2016-17, ದಿನಾಂಕ: 08.09.2016.
2. ತಾತ್ಕಾಲಿಕ ಆಯ್ಕೆ ಪಟ್ಟಿ ಅಧಿಸೂಚನೆಯ ಸಂಖ್ಯೆ: ಕವಿಪ್ರನಿನಿ/ಬಿ16/40360/2016-17, ದಿನಾಂಕ: 27.01.2018.
3. ಅಂತಿಮ ಆಯ್ಕೆ ಪಟ್ಟಿ ಅಧಿಸೂಚನೆಯ ಸಂಖ್ಯೆ: ಕವಿಪ್ರನಿನಿ/ಬಿ16/40360/2016-17, ದಿನಾಂಕ: 06.03.2018.
4. ಸಹಾಯಕ ಇಂಜಿನಿಯರ್(ವಿ), ಸಹಾಯಕ ಲೆಕ್ಕಾಧಿಕಾರಿ, ಕಿರಿಯ ಇಂಜಿನಿಯರ್(ಸಿವಿಲ್), ಸಹಾಯಕ ಮತ್ತು ಕಿರಿಯ ಸಹಾಯಕ ಹುದ್ದೆಗಳ ಕಾಯ್ದಿರಿಸಿದ ಪಟ್ಟಿ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/40360/2016-17, ದಿನಾಂಕ: 23.01.2019.

****

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/40360/2016-17, ದಿನಾಂಕ: 08.09.2016 ಕ್ಕೆ ಅನುಗುಣವಾಗಿ **ಆನ್-ಲೈನ್ ಆಪ್ಟಿಟ್ಯೂಡ್ ಟೆಸ್ಟ್‌ನಲ್ಲಿ** ಗಳಿಸಿರುವ ಅಂಕಗಳ ಜ್ಯೇಷ್ಟತೆಯ ಆಧಾರದ ಮೇರೆಗೆ ಸಹಾಯಕ ಇಂಜಿನಿಯರ್(ವಿ), ಸಹಾಯಕ ಲೆಕ್ಕಾಧಿಕಾರಿ, ಕಿರಿಯ ಇಂಜಿನಿಯರ್(ವಿದ್ಯುತ್/ಸಿವಿಲ್), ಸಹಾಯಕ ಮತ್ತು ಕಿರಿಯ ಸಹಾಯಕ ಹುದ್ದೆಗಳ **ಅಂತಿಮ ಆಯ್ಕೆ ಪಟ್ಟಿಯನ್ನು** ಕಟ್-ಆಫ್ (Cut-Off) ಅಂಕಗಳೊಂದಿಗೆ ದಿನಾಂಕ: 06.03.2018 ರಂದು ಕವಿಪ್ರನಿನಿಯ ಅಂತರ್ಜಾಲದಲ್ಲಿ ಪ್ರಕಟಿಸಲಾಗಿತ್ತು.

ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ಜಾರಿಗೊಳಿಸಿ ತೈನಾತಿಸಿರುವ ಸ್ಥಳಗಳಲ್ಲಿ ನಿಗಧಿಪಡಿಸಿದ ಕಡೆಯ ದಿನಾಂಕದೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವಂತೆ ಸೂಚಿಸಲಾಗಿತ್ತು. ಹಲವಾರು ಅಭ್ಯರ್ಥಿಗಳು ನಿಗಧಿಪಡಿಸಿದ ದಿನಾಂಕದೊಳಗಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವುದಿಲ್ಲ. ಅದರನ್ವಯ, ಕಿರಿಯ ಇಂಜಿನಿಯರ್(ವಿ) ಹುದ್ದೆಯನ್ನು ಹೊರತುಪಡಿಸಿ, ಸಹಾಯಕ ಇಂಜಿನಿಯರ್(ವಿ), ಸಹಾಯಕ ಲೆಕ್ಕಾಧಿಕಾರಿ, ಕಿರಿಯ ಇಂಜಿನಿಯರ್(ಸಿವಿಲ್), ಸಹಾಯಕ ಮತ್ತು ಕಿರಿಯ ಸಹಾಯಕ ಹುದ್ದೆಗಳಿಗೆ ಕಾಯ್ದಿರಿಸಿದ ಪಟ್ಟಿಯನ್ನು, ದಿನಾಂಕ: 23.01.2019 ರಂದು ಪ್ರಕಟಿಸಲಾಗಿತ್ತು.

ಪ್ರಸ್ತುತ, ಅಂತಿಮ ಆಯ್ಕೆ ಪಟ್ಟಿಯಲ್ಲಿ **ಕಿರಿಯ ಇಂಜಿನಿಯರ್(ವಿ)** ಹುದ್ದೆಗೆ ಆಯ್ಕೆಗೊಂಡು ನಿಗಧಿಪಡಿಸಿದ ದಿನಾಂಕದೊಳಗಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರದ ಅಭ್ಯರ್ಥಿಗಳಿಗೆ ಬದಲಾಗಿ ನಿಯಮಾನುಸಾರ ಆಯ್ಕೆಯಾಗುವ ಅರ್ಹ ಅಭ್ಯರ್ಥಿಗಳ **ಕಾಯ್ದಿರಿಸಿದ ಪಟ್ಟಿಯನ್ನು** ಕವಿಪ್ರನಿನಿಯ ಅಂತರ್ಜಾಲ www.kptcl.com ರಲ್ಲಿ ಪ್ರಕಟಿಸಲಾಗಿದೆ.

ಸದರಿ ಕಾಯ್ದಿರಿಸಿದ ಪಟ್ಟಿಗೆ ಸಮಂಜಸವಾದ ಆಕ್ಷೇಪಣೆಗಳಿದ್ದಲ್ಲಿ, ಅಭ್ಯರ್ಥಿಗಳು ಸೂಕ್ತ ವಿವರ ಹಾಗೂ ದಾಖಲಾತಿಗಳೊಂದಿಗೆ ತಮ್ಮ ಹೆಸರು, ಅರ್ಜಿ ಸಂಖ್ಯೆ ಹಾಗೂ ಅರ್ಜಿ ಸಲ್ಲಿಸಿದ್ದ ಹುದ್ದೆಯ ಹೆಸರಿನೊಂದಿಗೆ ಇ-ಮೇಲ್ ಐಡಿ ಸಂಖ್ಯೆ: kptclrecruitment2016@gmail.com ಗೆ ದಿನಾಂಕ: 19.02.2019 ರ ಒಳಗೆ ಸಲ್ಲಿಸಬಹುದಾಗಿದೆ. **ಆನ್‌ಲೈನ್ ಮೂಲಕ ಹೊರತುಪಡಿಸಿ ಇತರೆ ಮಾರ್ಗದಿಂದ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.**

<u>ನಿಗದಿತ ದಿನಾಂಕದ ನಂತರ ಸಲ್ಲಿಸಲಾಗುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.</u>

Sd/-
ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)
ನಿಗಮ ಕಾರ್ಯಾಲಯ, ಕವಿಪ್ರನಿನಿ,
ಕಾವೇರಿ ಭವನ, ಬೆಂಗಳೂರು.